ಸಾಕ್ಷಿಗೆ ಕ್ರಮಬದ್ಧವಾಗಿ ಪ್ರಮಾಣ ವಚನವನ್ನು ಬೋಧಿಸಲಾಯಿತು.

ಮುಖ್ಯ ವಿಚಾರಣೆ 2ನೇ ಎದುರುದಾರರ ಪರ ವಕೀಲರಿಂದಃ-

ನಾನು ಈಗ ಹಾಜರುಪಡಿಸಿದ ಪ್ರಮಾಣ ಪತ್ರವನ್ನು ನನ್ನ ಮುಖ್ಯ ವಿಚಾರಣೆಯನ್ನಾಗಿ ಪರಿಗಣಿಸಲು ಕೋರುತ್ತೇನೆ. ಪ್ರಮಾಣ ಪತ್ರದಲ್ಲಿನ ಎಲ್ಲಾ ಅಂಶಗಳು ಸತ್ಯವಾಗಿವೆ ಮತ್ತು ಅದರಲ್ಲಿ ನನ್ನ ಸಹಿ ಇರುತ್ತದೆ ಎಂದು ಪ್ರಮಾಣೀಕರಿಸುತ್ತೇನೆ.

ನಮ್ಮ ಕಂಪನಿಯವರು ನನಗೆ ನೀಡಿರುವ ಅನುಮತಿ ಪತ್ರವನ್ನು ನಿಆರ್1 ಎಂದು, ಷರತ್ತಿಗೂಳಪಟ್ಟ ವಿಮಾ ಪಾಲಿಸಿಯ ಪ್ರತಿಯನ್ನು ನಿಆರ್-2 ಎಂದು ಗುರುತಿಸಲಾಯಿತು.

ಪಾಟೀ ಸವಾಲು 2ನೇ ಎದುರುದಾರರ ಪರ ವಕೀಲರಿಂದಃ-

ಅಪಘಾತಕ್ಕೆ ಒಳಪಟ್ಟ ವಾಹನಕ್ಕೆ ದಿನಾಂಕ ಮತ್ತು ಸಮಯದಂದು ವಿಮೆ ಚಾಲ್ತಿಯಲ್ಲಿ ಇದೆ ಎಂದರೆ ಸರಿ. ಸದರಿ ಅಪಘಾತವು ವಾಹನ ಸಂಖ್ಯೆ ಕೆಎ-42-ಇಬಿ-8347 ವಾಹನದಿಂದ ಆಗಿದೆ ಎಂದರೆ ಸರಿ. ಅಪಘಾತಪಡಿಸಿದ ವಾಹನದ ಚಾಲಕನಿಗೆ ಡಿ.ಎಲ್ ಚಾಲ್ತಿಯಲ್ಲಿ ಇದ್ದರೂ ಸಹ ಇಲ್ಲ ಎಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ದೋಷಾರೋಪಣಾ ಪಟ್ಟಿಯಲ್ಲಿ ಡಿ.ಎಲ್ ಇಲ್ಲದಿರುವ ಬಗ್ಗೆ ನಮೂದನೆ ಇದೆ ಎಂದು ನುಡಿಯುತ್ತಾರೆ. ನಾನು ಅರ್ಜಿದಾರರಿಗೆ ಪರಿಹಾರ ಹಣ ಕೊಡುವ ಬಾಧ್ಯತೆಯಿಂದ ತಪ್ಪಿಸಿಕೊಳ್ಳಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆಃ- ಇಲ್ಲ

(ಸಾಕ್ಷಿಯು ಕೊಟ್ಟ ಸಾಕ್ಷ್ಯವನ್ನು ಬಹಿರಂಗ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಗಣಕೀಕರಿಸಿದೆ)
(ಸಾಕ್ಷಿಗೆ ಸಾಕ್ಷ್ಯವನ್ನು ಓದಿ ಹೇಳಲಾಗಿ ಕೇಳಿ ಸರಿ ಇದೆ ಎಂದು ಒಪ್ಪಿದ್ದಾರೆ)

(ನಿವೇದಿತ ಟಿ.ಎಂ.)
ರಾಮನಗರದ ಮೋಟಾರು ವಾಹನಗಳ ಅಪಘಾತದ
ಪರಿಹಾರಗಳ ಹೆಚ್ಚುವರಿ ನ್ಯಾಯಾ ಮಂಡಳಿಯ
ಪೀಠಾಧಿಕಾರಿಗಳು